ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Gamesa Renewable Private Limited ಕಂಪನಿಗೆ ಗದಗ ಜಿಲ್ಲೆ ಮತ್ತು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ತಾತ್ವಿಕ ಅನುಮತಿ ನೀಡಿರುವ 10 ಮೆ.ವ್ಯಾ. ಸಾಮರ್ಥ್ಯದ ಯೋಜನೆಯ ಸ್ಥಳದಲ್ಲಿ 30 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಬಗ್ಗೆ.

ಓದಲಾಗಿದೆ: 1 ಸರ್ಕಾರದ ಪತ್ರ ಸಂಖ್ಯೆ: ಇಎನ್ 56 ಎನ್‌ಸಿಇ 2016, ದಿನಾಂಕ: 28.04.2016
2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ:KRED/08/GRPL-10MW/GADAG/2016/1309-G

* * *

ಪ್ರಸ್ತಾವನೆ :-

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರದ ಪತ್ರದನ್ವಯ M/s Gamesa Renewable Private Limited ಕಂಪನಿಗೆ ಗದಗ ಜಿಲ್ಲೆಯ, ಗದಗ ತಾಲ್ಲೂಕಿನ ಹುಲಿಕೋಟಿ ಮತ್ತು ಹಿರೇ ಹಂದಿಗೋಲ ಗ್ರಾಮಗಳಲ್ಲಿ 10 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸುವ ಬಗ್ಗೆ ವಾಸ್ತವಿಕ ಸಾಮರ್ಥ್ಯಕ್ಕೆ ವಿಸ್ತೃತ ಯೋಜನಾ ವರದಿ (DPR) ಯನ್ನು ಎರಡು ವರ್ಷದೊಳಗಾಗಿ ತಯಾರಿಸಿ, ನಿಯಮಾನುಸಾರ ಪಾವತಿಸಬೇಕಾದ ಶುಲ್ಕದೊಂದಿಗೆ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸತಕ್ಕದೆಂಬ ಷರತ್ತಿಗೊಳಪಟ್ಟು ಸದರಿ ಯೋಜನೆಗೆ ಸರ್ಕಾರದ ತಾತ್ವಿಕ ಅನುಮತಿಯನ್ನು ನೀಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರನ್ವಯ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಏಕ ಕಡತ ಪದ್ಧತಿಯಡಿಯಲ್ಲಿ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Gamesa Renewable Private Limited ಕಂಪನಿಗೆ ಗದಗ ಜಿಲ್ಲೆಯ, ಗದಗ ತಾಲ್ಲೂಕಿನ ಹುಲಿಕೋಟಿ ಮತ್ತು ಹಿರೇ ಹಂದಿಗೋಲ ಗ್ರಾಮಗಳಲ್ಲಿ ತಾತ್ವಿಕ ಅನುಮೋದನೆ ನೀಡಿರುವ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸ್ಥಳದಲ್ಲಿ ವಾಸ್ತವಿಕ ಸಾಮರ್ಥ್ಯವಾದ 30 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಡಿಪಿಆರ್ ಶುಲ್ಕವನ್ನು ಅಭಿವೃದ್ಧಿದಾರರು ಪಾವತಿ ಮಾಡಿರುವುದರಿಂದ, M/s Gamesa Renewable Private Limited ಕಂಪನಿಗೆ ಗದಗ ಜಿಲ್ಲೆಯ, ಗದಗ ತಾಲ್ಲೂಕಿನ ಹುಲಿಕೋಟಿ ಮತ್ತು ಹಿರೇ ಹಂದಿಗೋಲ ಗ್ರಾಮಗಳಲ್ಲಿ 30 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಹಂಚಿಕೆ ಆದೇಶವನ್ನು ನೀಡಬಹುದೆಂದು ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ** ಸಂಖ್ಯೆ : ಇಎನ್ 212 ಎನ್‌ಸಿಇ **2017**,
ಬೆಂಗಳೂರು, **ದಿನಾಂಕ : 09.05.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಸರ್ಕಾರವು, M/s Gamesa Renewable Private Limited ಕಂಪನಿಗೆ ಗದಗ ಜಿಲ್ಲೆಯ, ಗದಗ ತಾಲ್ಲೂಕಿನ ಹುಲಿಕೋಟಿ ಮತ್ತು ಹಿರೇ ಹಂದಿಗೋಲ ಗ್ರಾಮಗಳಲ್ಲಿ ತಾತ್ವಿಕ ಅನುಮೋದನೆ ನೀಡಿರುವ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸ್ಥಳದಲ್ಲಿ ವಾಸ್ತವಿಕ ಸಾಮರ್ಥ್ಯವಾದ 30 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿದೆ.



Wind Section
1977
16-05-2017

M/s Gamesa Renewable Private Limited

| Sl. No. | Toposheet No. | Proposed capacity in MW | Near by villages of the proposed area and district. | Geographical area description of the project |
|---|---|---|---|---|
| 1 | 48 M/11 | 30 MW<br><br>(15 Nos x 2000 kW) | Hulkoti, Hombal, Asundi, Gadag Rural, Binkadakatti and Hire Handigola Villages of Gadag Taluk, Gadag District. | A plain area located on the North-East of Hulkoti and North - West of Gadag. A railway track runs in this identified area and has 5 peaks. The identified area is surrounded by points A, B, C, D and are held in the following Geographical co-ordinates as:<br><br>**Point A**:Lat:15°25'58.08"N, Long: 75°32'44.52"E<br>**Point B**:Lat:15°30'0"N, Long: 75°32'44.16"E<br>**Point C**:Lat:15°30'0"N, Long: 75°36'24.84"E<br>PointD:Lat:15°26'9.96"N, Long: 75°36'27"E<br><br>Peaks: 637, 656, 622, 611,692 and 626m AMSL. |
| | Total | **30 MW** | | |

ಷರತ್ತುಗಳು:-

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ :06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ:19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011, ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಯೋಜನಾ ಅನುಷ್ಠಾನ ಪ್ರದೇಶದಲ್ಲಿನ ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಯೊಂದಿಗೆಯೇ ವಿದ್ಯುತ್ ಖರೀದಿ ಒಡಂಬಡಿಕೆಯನ್ನು ಮಾಡಿಕೊಳ್ಳಲು / ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು / ಸ್ವಂತ ಬಳಕೆ ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಕೂಡ ಅನುಮತಿಸಲಾಗಿದೆ.
7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ
8 ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ
ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ
ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

9. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.

10. ಕರ್ನಾಟಕ ಭೂಸುಧಾರಣ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.

11. ಈ ಯೋಜನೆಗೆ ಸರ್ಕಾರದ ಕೈಗಾರಿಕ ನೀತಿ 2014-19 ರನ್ವಯ ಅನ್ವಯಿಸುವ ಸವಲತ್ತುಗಳು ಲಭ್ಯವಾಗುತ್ತವೆ.

ಸದರಿ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

<u>ಇವರಿಗೆ:</u>

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಶ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

<u>ಪ್ರತಿ:</u>

1 ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು 560001.
2 ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001
3 ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.
4 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ವಿಕಾಸ ಸೌಧ, ಬೆಂಗಳೂರು-1.
5 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
6 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಬೆಂಗಳೂರು-9.
7 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು-1.
8 ವ್ಯವಸ್ಥಾಪಕ ನಿರ್ದೇಶಕರು, ಹೆಸ್ಕಾಂ/ಬೆಸ್ಕಾಂ/ಸೆಸ್ಕ್/ಮೆಸ್ಕಾಂ/ಜೆಸ್ಕಾಂ.
9 ಜಿಲ್ಲಾಧಿಕಾರಿ, ಗದಗ ಜಿಲ್ಲೆ, ಗದಗ.
10 ಉಪ ಅರಣ್ಯ ಸಂರಕ್ಷಣಾಧಿಕಾರಿ, ಗದಗ ಪ್ರಾದೇಶಿಕ ವಿಭಾಗ, ಗದಗ.
11 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
12 M/s Gamesa Renewable Private Limited., No. 24, Saraogi Mansion, 2nd Cross, Nehru Nagar, Sheshadripuram, Banglaroe-560 020.
13 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
14 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
15 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.